ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618.
Web: www.gokdom.com
20ನೇ ಮಹಡಿ, ವಿ.ವಿ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ-: ಅಸಂನಿ/ವಿ.ವೇ/ಡಿಙ/ಸಿ.ಆರ್-04/2020-21 ದಿನಾಂಕ:-09.10.2020

ಗೆ,

**ತುರ್ತು**

ಎಲ್ಲಾ ಜಿಲ್ಲಾ ಅಧಿಕಾರಿಗಳು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

**ವಿಷಯ:-** ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಗೆ 2020-21 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನಲ್ಲಿ ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನದ ಅರ್ಜಿಗಳನ್ನು ಸ್ವೀಕರಿಸುವ ಮತ್ತು ದಾಖಲೆಗಳನ್ನು ಪರಿಶೀಲಿಸಿ ಆನ್‌ಲೈನ್ ಮಾಹಿತಿ ಸಲ್ಲಿಸುವ ಬಗ್ಗೆ.

ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರ ವಿಧಿಸಿರುವ ನಿಯಮದಂತೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ 2020-21 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನ ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕವನ್ನು ದಿನಪತ್ರಿಕೆಗಳಲ್ಲಿ ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ದಿನಾಂಕ:- 04.10.2020 ರಂದು ಹೊರಡಿಸಲಾಗಿದೆ. ಪ್ರಕಟನೆಯ ಪ್ರತಿಯನ್ನು ಈ ಪತ್ರದೊಂದಿಗೆ ಲಗ್ಗತ್ತಿಸಿದೆ.

ಜಿಲ್ಲಾ ಅಲ್ಪಸಂಖ್ಯಾತ ಅಧಿಕಾರಿಗಳು ಆನ್‌ಲೈನ್ ಅರ್ಜಿ ಮತ್ತು ದಾಖಲೆಗಳ ಮೇರೆ ಈ ಕೆಳಗೆ ನಮೂದಿಸಿರುವಂತೆ ಕ್ರಮ ಕೈಕೊಳ್ಳಲು ಆದೇಶಿಸಲಾಗಿದೆ.

1. ಈ ಯೋಜನೆಯ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಸಾರ್ವಜನಿಕರ/ವಿದ್ಯಾರ್ಥಿಗಳ ಮಾಹಿತಿಗಾಗಿ ಅರಿವು ಮೂಡಿಸಲು ಸೂಕ್ತ ಕ್ರಮ ವಹಿಸುವುದು.
2. ಸರ್ಕಾರ ವಿಧಿಸಿರುವ ನಿಯಮಾನುಸಾರ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಗಳನ್ನು ನಿಗದಿಪಡಿಸಿರುವ ಎಲ್ಲಾ ದಾಖಲೆಗಳ ಸಮೇತ ಕೊನೆಯ ದಿನಾಂಕದೊಳಗೆ ತಾಲೂಕಿನ ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳ ಕಚೇರಿಯಲ್ಲಿ ಸ್ವೀಕರಿಸುವ ವ್ಯವಸ್ಥೆ ಮಾಡತಕ್ಕದ್ದು.
3. ಸಂಬಂಧಪಟ್ಟ ಜಿಲ್ಲಾ ಮತ್ತು ತಾಲೂಕಿನ ಸಿಬ್ಬಂದಿಯವರಿಗೆ, ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸುವ ಮತ್ತು ಇದರ ಪರಿಶೀಲನೆ ಹಾಗೂ ಸುರಕ್ಷಿತವಾಗಿ ಅರ್ಜಿಗಳನ್ನು ಇಟ್ಟುಕೊಳ್ಳುಲು ಅನುವಾಗುವಂತೆ ಕ್ರಮವಹಿಸುವುದು.
4. ಆನ್‌ಲೈನ್ ಅರ್ಜಿಗಳನ್ನು ಕಾಲೇಜುಗಳಲ್ಲಿ ಪರಿಶೀಲಿಸುವ ವಿಧಾನವನ್ನು ಈ ಪತ್ರದೊಂದಿಗೆ ಲಗ್ಗತ್ತಿಸಿದೆ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚೂರು ಪಡಿಸಲಾಗಿದೆ.
5. National Scholarship Portal-NSP ನಲ್ಲಿ ಹೊಸ ಕಾಲೇಜುಗಳನ್ನು ದಾಖಲಿಸಲು ಮತ್ತು ಕಾಲೇಜಿನ USER ID, PASSWORD ಪಡೆಯಲು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ FORMAT ಅನ್ನು ಪ್ರಕಟಿಸಲಾಗಿದೆ. ಸೇರ್ಪಡೆಯಾಗಬೇಕಾಗಿರುವ ಕಾಲೇಜಿನ

ಪು.ತಿ.ನೋ

ಅರ್ಜಿ ನಮೂನೆಗಳನ್ನು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯನ ಕಚೇರಿಯಲ್ಲಿ ಸ್ವೀಕರಿಸಿ, ಪರಿಶೀಲಿಸಿ ತಮ್ಮ ಧೃಢೀಕರಣದೊಂದಿಗೆ ಈ-ಮೇಲ್ ಮೂಲಕ ನಿರ್ದೇಶನಾಲಯಕ್ಕೆ ಕಳುಹಿಸಬೇಕು.

**ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಸಹಾಯಕ ನಿರ್ದೇಶಕರಾದ ಶ್ರೀಮತಿ. ಆಯಿಷಾ ಫಿರದೋಸ್ ಇವರನ್ನು ಸಂಪರ್ಕಿಸಬಹುದಾಗಿರುತ್ತದೆ.**

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು

<u>ಟಿಪ್ಪಣಿ:-</u>

ಕರ್ನಾಟಕ ಸರ್ಕಾರದಿಂದ ವಿದ್ಯಾರ್ಥಿವೇತನವನ್ನು ಪಡೆಯಲು ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ಮತ್ತು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (State Scholarship Portal-SSP) ಗಳಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ.

ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (State Scholarship Portal-SSP) ನ ಬಗ್ಗೆ ಮಾಹಿತಿಯನ್ನು ನಂತರದಲ್ಲಿ ತಿಳಿಸಲಾಗುವುದು.

ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618.
**Email: directorgokdom@gmail.com**
**Web: www.gokdom.kar.nic.in**
20ನೇ ಮಹಡಿ, ವಿ.ವಿ ಗೋಪುರ,
ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ: ಅಸಂನಿ/ವಿ.ವೇ/ಇಡಿಎನ್/ಸಿಆರ್-03/2020-21

ದಿನಾಂಕ: 08.10.2020

**ತುರ್ತು**

ಗೆ,
ಉಪ ನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ
-----ಎಲ್ಲ--------- ಜಿಲ್ಲೆ

**ವಿಷಯ:-** ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 2020-21 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನಲ್ಲಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿವೇತನದ ಅರ್ಜಿಗಳನ್ನು ಸ್ವೀಕರಿಸುವ ಮತ್ತು ದಾಖಲೆಗಳನ್ನು ಪರಿಶೀಲಿಸಿ ಆನಲೈನ್ ಮಾಹಿತಿ ಸಲ್ಲಿಸುವ ಬಗ್ಗೆ.

ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರ ವಿಧಿಸಿರುವ ನಿಯಮದಂತೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ 2020-21 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನ ಮೆಟ್ರಿಕ್-ಪೂರ್ವ ವಿದ್ಯಾರ್ಥಿವೇತನದ ಅರ್ಜಿಗಳನ್ನು ಆನಲೈನ್ ಮೂಲಕ ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕವನ್ನು ದಿನಪತ್ರಿಕೆಗಳಲ್ಲಿ ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ದಿನಾಂಕ:- 04.10.2020 ರಂದು ಹೊರಡಿಸಲಾಗಿದೆ.ಪ್ರತಿ ವರ್ಷದಂತೆ ತಮ್ಮ ಮತ್ತು ತಮ್ಮ ಇಲಾಖೆಯ ಸಹಕಾರ ಮತ್ತು ಕಾರ್ಯವನ್ನು ಸರ್ಕಾರ ಮತ್ತು ಅಲ್ಪಸಂಖ್ಯಾತರ ಇಲಾಖೆ ಮೆಚ್ಚಿದೆ.

ಪ್ರತಿ ವರ್ಷದಂತೆ ಈ ವರ್ಷವೂ ತಮ್ಮ ಇಲಾಖೆಯಿಂದ ಕೈಗೊಳ್ಳಬೇಕಾದ ಕ್ರಮ ಈ ಕೆಳಗೆ ನಮೂದಿಸಿರುವಂತೆ ಇರುತ್ತದೆ.

ಸರ್ಕಾರ ವಿಧಿಸಿರುವ ಮಾರ್ಗದರ್ಶನದಂತೆ ಪ್ರತಿಯೊಬ್ಬ ಅರ್ಹ ವಿದ್ಯಾರ್ಥಿಯು ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸುವುದು ಮತ್ತು ಆನ್‌ಲೈನ್ ಅರ್ಜಿ ಜೊತೆಯೊಂದಿಗೆ ನಿಗದಿಪಡಿಸಿರುವ ದಾಖಲೆಗಳೊಂದಿಗೆ ಅರ್ಜಿಗಳನ್ನು ಅವರವರ ಮುಖ್ಯೋಪಾದ್ಯಯರಿಗೆ ಸಲ್ಲಿಸಬೇಕು. ಮುಖ್ಯೋಪಾದ್ಯಯರು ವಿದ್ಯಾರ್ಥಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಮುಂದಿನ ಮಾಹಿತಿಗಾಗಿ ಅವರಲ್ಲಿ ಇಟ್ಟುಕೊಳ್ಳತಕ್ಕದ್ದು.

ಮುಖ್ಯೋಪಾದ್ಯಯರು/ಪ್ರಾಂಶುಪಾಲರು ತೆಗೆದುಕೊಳ್ಳಬೇಕಾದ ಕ್ರಮ:-

ಅ) ಪ್ರತಿಯೊಬ್ಬ ಅಲ್ಪಸಂಖ್ಯಾತ ವಿದ್ಯಾರ್ಥಿಯ ಅರ್ಜಿಯನ್ನು ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ಆನ್‌ಲೈನ್ ಮೂಲಕ ಸಲ್ಲಿಸುವಂತೆ ನೋಡಿಕೊಳ್ಳತಕ್ಕದ್ದು.

ಆ) ವಿದ್ಯಾರ್ಥಿಗಳು ನೀಡುವ ಅರ್ಜಿಗಳು (HARD COPY) ದಾಖಲೆಗಳ ಸಮೇತ ಸ್ವೀಕರಿಸಿ ಅವರ ಬಳಿ ಇಟ್ಟುಕೊಳ್ಳತಕ್ಕದ್ದು.

ಪು.ತಿ.ನೋ